ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಸಹಕಾರಿ ಬ್ಯಾಂಕಿನಲ್ಲಿ 371(ಜೆ) ಅನ್ನು ಅನುಷ್ಠಾನಗೊಳಿಸಿರುವ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು):-

1546 (1841) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಯಮಿತ ಕೇಂದ್ರ ಕಛೇರಿಯಲ್ಲಿ ಎಷ್ಟು ಅಧಿಕಾರಿ/ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಹುದ್ದೆ/ಹೆಸರುಗಳೊಂದಿಗೆ ಸಂಪೂರ್ಣ ವಿವರ ನೀಡುವುದು ;

(ಆ) ಸದರಿ ಬ್ಯಾಂಕಿನಲ್ಲಿ ಹೈದರಾಬಾದ್-ಕರ್ನಾಟಕ ಭಾಗಕ್ಕೆ ಸಂವಿಧಾನದ ಅನುಚ್ಛೇದ 371(ಜೆ) ರನ್ವಯ ನೇಮಕಾತಿಯಲ್ಲಿ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆಯೇ; ಇದ್ದಲ್ಲಿ, ಸ್ಪಷ್ಟ ಮಾಹಿತಿ ನೀಡುವುದು ;

(ಇ) ಸದರಿ ಕೇಂದ್ರ ಕಛೇರಿ ಮತ್ತು ಶಾಖಾ ಬ್ಯಾಂಕುಗಳಲ್ಲಿ ಸಂವಿಧಾನದ ಅನುಚ್ಛೇದ 371(ಜೆ) ರನ್ವಯ ಪದೋನ್ನತಿ ಪಡೆದಿರುವ ಅಧಿಕಾರಿ/ನೌಕರರ ಹೆಸರು ಮತ್ತು ಹುದ್ದೆವಾರು ಮಾಹಿತಿ ನೀಡುವುದು;

(ಈ) ಸಂವಿಧಾನದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಸರ್ಕಾರವು ಉಪ ಸಮಿತಿಯನ್ನು ರಚಿಸಿದೆಯೇ; ಇದ್ದಲ್ಲಿ, ಕರ್ನಾಟಕ ರಾಜ್ಯ ಸರ್ಕಾರಿ ಅಪೆಕ್ಸ್ ಬ್ಯಾಂಕ್‌ನಲ್ಲಿ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)